ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ: ಎಡಿಎಂ-2[1]ಮ್ಯಾ.ಸ್ಕ್ಯಾ-96/2020-21 ದಿನಾಂಕ:-18-01-2021

## ಸುತ್ತೋಲೆ

ವಿಷಯ: ಶಿಕ್ಷಣ ವಂಚಿತ ಸಫಾಯಿ ಕರ್ಮಚಾರಿಗಳ ಅವಲಂಬಿತ ಮಕ್ಕಳಿಗೆ ಶಿಕ್ಷಣ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಗ್ರಾಅಪ 20 ಎಸ್ ಜೆ ವೈ 2015 (ಭಾಗ-1) ದಿನಾಂಕ: 05-01-2018

2. ಸರ್ಕಾರದ ಜಂಟಿಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಕಿ 544 ಎಸ್‌ಡಿಸಿ ದಿನಾಂಕ: 15-12-2017

3. ಮಾನ್ಯ ನ್ಯಾಯಾಲಯದ ಪ್ರಕರಣ ಸಂಖ್ಯೆ: ಡಬ್ಲ್ಯೂ.ಪಿ-8928/2020

4. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ-2(4) ಮ.ಶಿ.ಹ-22/2020-21 ದಿನಾಂಕ: 08-01-2021

*******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಮಾನ್ಯ ಸದಸ್ಯರು, ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗ, ಭಾರತ ಸರ್ಕಾರ, ನವದೆಹಲಿ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 12-01-2021 ರಂದು ನಡೆದ ಸಫಾಯಿ ಕರ್ಮಚಾರಿಗಳಿಗೆ ವಿವಿಧ ಇಲಾಖೆಗಳಡಿ ಒದಗಿಸುವ ಸೌಲಭ್ಯಗಳ ಪರಿಶೀಲನಾ ಸಭೆಯ ನಡಾವಳಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ಮಕ್ಕಳನ್ನು ಸಮೀಕ್ಷೆ ಮಾಡಿ ಸರ್ಕಾರಿ/ಅನುದಾನಿತ ಶಾಲೆಗಳಿಗೆ ಸೇರಿಸಲು ಕ್ರಮವಹಿಸಲು ತೀರ್ಮಾನಿಸಿರುತ್ತಾರೆ.

ರಾಜ್ಯಸರ್ಕಾರದ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯು ಮಕ್ಕಳಿಗೆ ಪ್ರೋತ್ಸಾಹದಾಯಕ ಯೋಜನೆಗಳಾದ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಉಚಿತ ಸಮವಸ್ತ್ರ, ಉಚಿತ ಪಠ್ಯಪುಸ್ತಕ ಮತ್ತು ಬೈಸಿಕಲ್ ವಿತರಣೆ ಇತ್ಯಾದಿಗಳನ್ನು ವಿತರಿಸಲಾಗುತ್ತಿದೆ. ನುರಿತ ಶಿಕ್ಷಕರಿಂದ ಬೋಧನೆಯನ್ನು ನೀಡಲಾಗುತ್ತಿದೆ. ಇದರ ಪ್ರಯೋಜನವನ್ನು ಎಲ್ಲಾ ಅರ್ಹ ಫಲಾನುಭವಿಗಳು ಪಡೆಯುವ ಸಲುವಾಗಿ ಜಾಗೃತಿ ಮೂಡಿಸುವುದು.

ಸದರಿ ಸಭೆಯಲ್ಲಿ ತೀರ್ಮಾನಿಸಿರುವಂತೆ ಬಿ.ಬಿ.ಎಂ.ಪಿ./ಮಹಾನಗರ ಪಾಲಿಕೆ/ಪೌರಾಡಳಿತ ಮಂಡಳಿ/ ಕೊಳಚೆ ನಿರ್ಮೂಲನ ಮಂಡಳಿ ಮತ್ತು ಸ್ಲಂ ಬೋರ್ಡ್ ಅಧಿಕಾರಿಗಳ ಸಹಕಾರದೊಂದಿಗೆ ರಾಜ್ಯಾದ್ಯಂತ ಸಫಾಯಿ ಕರ್ಮಚಾರಿಗಳ ಹಾಗೂ ಅವರ ಅವಲಂಬಿತ ಶಿಕ್ಷಣ ವಂಚಿತ ಮಕ್ಕಳನ್ನು ಗುರ್ತಿಸಿ, ಶಿಕ್ಷಣದ ಮಹತ್ವದ ಕುರಿತು ಜಾಗೃತಿಯನ್ನು ಮೂಡಿಸಿ ಎಲ್ಲಾ ಶಿಕ್ಷಣ ವಂಚಿತ ಮಕ್ಕಳನ್ನು ಮುಖ್ಯವಾಹಿನಿಗೆ ತರುವಲ್ಲಿ ಕ್ರಮವಹಿಸುವುದು ಹಾಗೂ ಇಂತಹ ಮಕ್ಕಳನ್ನು ಸರ್ಕಾರದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ದಾಖಲಾತಿಯನ್ನು ಒದಗಿಸುವಂತೆ ಕ್ರಮವಹಿಸುವುದು.

ಸಂಬಂಧಿಸಿದ ಪೂರ್ಣ ಮಾಹಿತಿಯು ಆಯಾ ಜಿಲ್ಲೆಗಳ ಜಿಲ್ಲಾ ಪಂಚಾಯಿತಿ ಕಾರ್ಯಾಲಯದಲ್ಲಿ ಲಭ್ಯವಿರುತ್ತದೆ. ಆದ್ದರಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ, ಆದ್ಯತೆಯ ಮೇರೆಗೆ ಅಗತ್ಯ ಕ್ರಮವಹಿಸಲು ತಿಳಿಸಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಇವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಅಭಿವೃದ್ಧಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಸೂಕ್ತಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು/ಕ್ಷೇತ್ರಸಮನ್ವಯಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಸೂಕ್ತಕ್ರಮಕ್ಕಾಗಿ

ಪ್ರತಿಗಳನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು ರವರಿಗೆ ಮಾಹಿತಿಗಾಗಿ
2. ಸರ್ಕಾರದ ಜಂಟಿಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು ರವರಿಗೆ ಮಾಹಿತಿಗಾಗಿ 3. ಕಛೇರಿ ಪ್ರತಿ